**ದಿನಾಂಕ: 09-04-2010ರಂದು ಪೂರ್ವಾಹ್ನ: 11-00ಗಂಟೆಗೆ ಹೇಮಾವತಿ ಸಭಾಂಗಣ, ಜಿಲ್ಲಾ ಪಂಚಾಯಿತಿ, ಹಾಸನ ಇಲ್ಲಿ ನಡೆದ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳು**

**ಅಧ್ಯಕ್ಷರು: ಶ್ರೀ ಹೆಚ್.ವೈ ಚಂದ್ರಶೇಖರ್**

**ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ**

**ಜಿಲ್ಲಾ ಪಂಚಾಯಿತಿ, ಹಾಸನ.**

ಹಾಜರಿ-06 ಗೈರು ಹಾಜರಿ: 1

| ಕ್ರಸಂ | ವಿಷಯ | ಚರ್ಚೆ | ತೀರ್ಮಾನ |
|---|---|---|---|
| | | ಉಪ ಕಾರ್ಯದರ್ಶಿ(ಆಡಳಿತ)ರವರು ಸಭೆಗೆ ಮಾನ್ಯ ಸಮಿತಿ ಅಧ್ಯಕ್ಷರು, ಸದಸ್ಯರು ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳನ್ನು ಸ್ವಾಗತಿಸುತ್ತಾ, ಅಧ್ಯಕ್ಷತೆಯನ್ನು ವಹಿಸಿ ಸಭೆಯನ್ನು ನಡೆಸಿಕೊಡುವಂತೆ ಮಾನ್ಯ ಸಮಿತಿ ಅಧ್ಯಕ್ಷರನ್ನು ಕೋರಿದರು. | |
| 1 | ಆಲೂರು ಟೌನ್‌ನಲ್ಲಿ ಡಾ: ಬಿ.ಆರ್.ಅಂಬೇಡ್ಕರ್ ಭವನ ನಿರ್ಮಾಣ ಮಾಡಲು ನಿವೇಶನ ಹಸ್ತಾಂತರಿಸುವ ಬಗ್ಗೆ. | ಟಿಪ್ಪಣಿ ಸಂಖ್ಯೆ: ಜಿಪಮಹಾ/ಯೋವಿ(4) ನಿವೇಶನ-7/2010-11 ದಿನಾಂಕ: 05-04-2010ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಆಲೂರು ತಾಲ್ಲೂಕು ಪಂಚಾಯಿತಿ ಸಾಮಾನ್ಯ ಸಭೆಯಲ್ಲಿ ಆಲೂರು ಟೌನ್‌ನಲ್ಲಿ ಅಂಬೇಡ್ಕರ್ ಭವನ ನಿರ್ಮಾಣಕ್ಕಾಗಿ ಅಗತ್ಯವಿದ್ದ 100X 100 ವಿಸ್ತೀರ್ಣದ ನಿವೇಶನವನ್ನು ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆ, ಆಲೂರು ಇವರಿಗೆ ವಹಿಸಲು ತೀರ್ಮಾನಿಸಲಾಗಿದ್ದು, ಅದರಂತೆ, ನಿವೇಶನ ಹಸ್ತಾಂತರಕ್ಕೆ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಆಲೂರು ಇವರು ಮನವಿ ಸಲ್ಲಿಸಿ ಜಿಲ್ಲಾ ಪಂಚಾಯಿತಿಯ ಅನುಮೋದನೆ ಕೋರಿರುತ್ತಾರೆ. | ಸಭೆಯಲ್ಲಿ ಈ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಆಲೂರು ಇವರು ಕೋರಿರುವಂತೆ ಆಲೂರು ಟೌನ್‌ನಲ್ಲಿ ಅಂಬೇಡ್ಕರ್ ಭವನ ನಿರ್ಮಾಣಕ್ಕಾಗಿ ಅಗತ್ಯವಿರುವ 100 X 100 ವಿಸ್ತೀರ್ಣದ ನಿವೇಶನವನ್ನು ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆ, ಆಲೂರು ಇವರಿಗೆ ವಹಿಸಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |
| 2 | ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ ಮತ್ತು ಹಿಂದುಳಿದ ವರ್ಗಗಳ ವಿದ್ಯಾರ್ಥಿನಿಲಯ/ವಸತಿ/ಆಶ್ರಮ ಶಾಲೆಗಳಿಗೆ ಆಹಾರ ಪದಾರ್ಥಗಳನ್ನು 2010-11ನೇ ಸಾಲಿನಲ್ಲಿ ಸರಬರಾಜು ಮಾಡುವ ಬಗ್ಗೆ. | ದಿನಾಂಕ: 17-02-2010ರಂದು ಪೂರ್ವಾಹ್ನ: 11-00ಗಂಟೆಗೆ ನಡೆದ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಸಭೆಯಲ್ಲಿ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ನಡೆಯುತ್ತಿರುವ ವಿದ್ಯಾರ್ಥಿನಿಲಯಗಳು ಮತ್ತು ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ 2010-11ನೇ ಸಾಲಿಗೆ ರೂ.1.00ಲಕ್ಷಗಳಿಗಿಂತ ಹೆಚ್ಚಿನ ಖರೀದಿಗೆ ಪಾರದರ್ಶಕ ನಿಯಮದಂತೆ ಟೆಂಡರ್ ಆಹ್ವಾನಿಸಿ ದರಗಳನ್ನು ನಿಗದಿಪಡಿಸಲು ಮತ್ತು ಸರ್ಕಾರದ ಆದೇಶ ಸಂಖ್ಯೆ: ಸಕಇ 123 ಸಮನ್ವಯ 2008 ದಿನಾಂಕ: 16-07-2008ರಂತೆ ವಿದ್ಯಾರ್ಥಿನಿಲಯಗಳು ಆಶ್ರಮಶಾಲೆ ಮತ್ತು ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ ಸರಳೀಕರಣ ಪದ್ಧತಿ ಅನುಸರಿಸಿ ಆಹಾರ ಸಾಮುಗ್ರಿಗಳು ಮತ್ತು ಇತರೆ ಸಾಮುಗ್ರಿಗಳನ್ನು ಸಾರ್ವಜನಿಕ | ಸಭೆಯಲ್ಲಿ ಈ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ದಿನಾಂಕ: 25-03-2010ರ ಸರ್ಕಾರದ ಆದೇಶದಂತೆ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ ಮತ್ತು ಹಿಂದುಳಿದ ವರ್ಗಗಳ ಹಾಗೂ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ/ ಇಲಾಖೆಗಳಿಗೆ |

| | | | |
|---|---|---|---|
| | | ಸಂಗ್ರಹಣೆಗಳಲ್ಲಿ ಪಾರದರ್ಶಕ ಅಧಿನಿಯಮ 1999 ನಿಯಮ 2000ರಡಿ ಟೆಂಡರ್ ಕರೆದು ನಿಯಮಾನುಸಾರ ಖರೀದಿಸಲು ಸಭೆಯು ಸರ್ವಾನುಮತದಿಂದ ಅನುಮೋದನೆ ನೀಡಲಾಗಿರುತ್ತದೆ.<br>ಸರ್ಕಾರದ ಆದೇಶ ಸಂಖ್ಯೆ; ಸಕಇ 123 ಸಮನ್ವಯ 2008 ದಿನಾಂಕ: 25-03-2010ರಲ್ಲಿ ಸರ್ಕಾರದ ಆದೇಶ ಸಂಖ್ಯೆ: ಸಕಇ 123 ಸಮನ್ವಯ 2008 ದಿನಾಂಕ: 16-07-2008ರ ಸರಳೀಕರಣದ ಪದ್ಧತಿಯಡಿ ಆಹಾರ ಧಾನ್ಯಗಳನ್ನು ವಿದ್ಯಾರ್ಥಿನಿಲಯ/ವಸತಿ/ ಆಶ್ರಮಶಾಲೆಗಲ ಮೇಲ್ವಿಚಾರಕರು/ ಅಧೀಕ್ಷಕರು ತಮ್ಮ ಮಟ್ಟದಲ್ಲಿ ಖರೀದಿ ಮಾಡಿಕೊಳ್ಳಲು ನೀಡಿದ ಆದೇಶವನ್ನು ಹಿಂದಕ್ಕೆ ಪಡೆಯಲಾಗಿದೆ.<br>1. ಸದರಿ 25-03-2010ರ ಸರ್ಕಾರದ ಆದೇಶದಲ್ಲಿ ದಿನಾಂಕ: 01-04-2010ರಿಂದ ವಿದ್ಯಾರ್ಥಿನಿಲಯ/ ವಸತಿ/ ಆಶ್ರಮ ಶಾಲೆಗಳಿಗೆ ಬೇಕಾಗುವ ಆಹಾರ ಧಾನ್ಯಗಳು ಮತ್ತು ಇತರೆ ಪದಾರ್ಥಗಳನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 ಅಡಿಯಲ್ಲಿ ಒಂದೊಂದು ತಾಲ್ಲೂಕಿಗೆ ಪ್ರತ್ಯೇಕವಾಗಿ ಟೆಂಡರ್ ಕರೆದು ದರಗಳನ್ನು ಮತ್ತು ಗುಣಮಟ್ಟವನ್ನು ನಿರ್ಣಯಿಸಿ ಸರಬರಾಜು ಮಾಡಲು ಆದೇಶಿಸಲಾಗಿದೆ. ಇದನ್ನು ಅನುಷ್ಠಾನ ಗೊಳಿಸಲು ಈ ಕೆಳಕಂಡ ಜಿಲ್ಲಾ ಮಟ್ಟದ ಸಮಿತಿಗೆ ಅಧಿಕಾರವನ್ನು ನೀಡಲಾಗಿದೆ.<br>2. **<u>ಜಿಲ್ಲಾ ಮಟ್ಟದ ಸಮಿತಿ:-</u>**<br>1. ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ - ಅಧ್ಯಕ್ಷರು<br>2. ಉಪ ನಿರ್ದೇಶಕರು, ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ - ಸದಸ್ಯರು<br>3. ಮುಖ್ಯ ಲೆಕ್ಕಾಧಿಕಾರಿಗಳು , ಜಿಲ್ಲಾ ಪಂಚಾಯಿತಿ - ಸದಸ್ಯರು<br>4. ಜಿಲ್ಲಾ ಮಟ್ಟದ ಪರಿಶಿಷ್ಟ ವರ್ಗಗಳ ಕಲ್ಯಾಣ/ ಸಮನ್ವಯ ಅಧಿಕಾರಿ - ಸದಸ್ಯರು<br>5. ಜಿಲ್ಲಾ ಮಟ್ಟದ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ - ಸದಸ್ಯರು<br>6. ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ - ಸದಸ್ಯ ಕಾರ್ಯದರ್ಶಿ<br>3. ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ ಮತ್ತು ಹಿಂದುಳಿದ ವರ್ಗಗಳ ಹಾಗೂ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ/ ಇಲಾಖೆಗಳಿಗೆ ಸೇರಿದ ಎಲ್ಲಾ ವಿದ್ಯಾರ್ಥಿನಿಲಯ/ ವಸತಿ/ ಆಶ್ರಮಶಾಲೆಗಳಿಗೆ ಸೇರಿಸಿ ಒಂದೇ ಟೆಂಡರನ್ನು ಕರೆಯುವುದು. ಆಯಾ ತಾಲ್ಲೂಕಿಗೆ ಒಪ್ಪಿರುವ ದರಗಳಂತೆ ಮೂರು ಇಲಾಖೆಗಳು ಖರೀದಿಸುವುದು ಎಂದು ಸರ್ಕಾರದ ಆದೇಶದಲ್ಲಿ ಆದೇಶಿಸಲಾಗಿದೆ.<br>ಆದುದರಿಂದ, ದಿನಾಂಕ: 25-03-2010ರ ಸರ್ಕಾರದ ಆದೇಶದಂತೆ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿನಿಲಯಗಳು/ವಸತಿ/ ಆಶ್ರಮ ಶಾಲೆಗಳಿಗೆ 2010-11ನೇ ಸಾಲಿನಲ್ಲಿ ಆಹಾರ ಸಾಮಗ್ರಿ ಇತರೆ ಸಾಮಗ್ರಿಗಳನ್ನು ಸದಸ್ಯ ಕಾರ್ಯದರ್ಶಿಗಳಾದ ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿಗಳು, ಹಾಸನರವರು ಕರ್ನಾಟಕ ಪಾರದರ್ಶಕ ನಿಯಮದಂತೆ ಟೆಂಡರು ಆಹ್ವಾನಿಸಿ ದರಗಳನ್ನು ಅಂಗೀಕರಿಸಿ | ಸೇರಿದ ಎಲ್ಲಾ ವಿದ್ಯಾರ್ಥಿನಿಲಯ/ ವಸತಿ/ ಆಶ್ರಮಶಾಲೆಗಳಿಗೆ 2010-11ನೇ ಸಾಲಿನಲ್ಲಿ ಆಹಾರ ಸಾಮಗ್ರಿ ಮತ್ತು ಇತರೆ ಅವಶ್ಯ ಸಾಮಗ್ರಿಗಳನ್ನು ಸದಸ್ಯ ಕಾರ್ಯದರ್ಶಿಗಳಾದ ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿಗಳು, ಹಾಸನರವರು ಕರ್ನಾಟಕ ಪಾರದರ್ಶಕ ನಿಯಮದಂತೆ ಜಿಲ್ಲೆಯ 8 ತಾಲ್ಲೂಕುಗಳಿಗೂ ಪ್ರತ್ಯೇಕವಾಗಿ ಟೆಂಡರು ಆಹ್ವಾನಿಸಿ ದರಗಳನ್ನು ಅಂಗೀಕರಿಸಲು ಸಭೆಯು ಸರ್ವಾನುಮತದಿಂದ ಅನುಮೋದನೆ ನೀಡಿತು<br>2010-11ನೇ ಸಾಲಿನಲ್ಲಿ ಟೆಂಡರು ಆಹ್ವಾನಿಸಿ ಅಂತಿಮೀಕರಿಸುವ ವರೆಗೆ 2009-10ನೇ ಸಾಲಿನಲ್ಲಿ ರೂ.1.00 ಲಕ್ಷಕ್ಕೆ ಮೀರಿದ ಸಂದರ್ಭ ದಲ್ಲಿ ಟೆಂಡರ್ ಕರೆದು ಅಂಗೀಕರಿ ಸಲ್ಪಟ್ಟಿದ್ದ ಟೆಂಡರುದಾರರಿಂದ ಆಹಾರ ಸಾಮಗ್ರಿಗಳನ್ನು ಖರೀದಿಸಲು ಹಾಗೂ ದಿನಾಂಕ: 16-07-2008ರ ಸರ್ಕಾರದ ಸರಳೀಕರಣ ವ್ಯವಸ್ಥೆಯಂತೆ ಮುಂದು ವರೆಸಿ, ಆಹಾರ ಸಾಮಗ್ರಿ ಮತ್ತು ಇತರೆ ಸಾಮಗ್ರಿಗಳನ್ನು ಖರೀದಿಸಿ ವಿದ್ಯಾರ್ಥಿ ನಿಲಯ/ ವಸತಿ/ ಆಶ್ರಮ / ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ/ ಆಶ್ರಮ ಶಾಲೆಗಳ ಸುಗಮ ನಿರ್ವಹಣೆಯನ್ನು ಮಾಡಲು ಸಭೆಯು ಸರ್ವಾನುಮತದಿಂದ |

| | | | |
|---|---|---|---|
| | | ಕೊಡಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಕ್ತ ಅನುಮೋದನೆಗಾಗಿ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಸಭೆಗೆ ಟಿಪ್ಪಣಿ ಸಲ್ಲಿಸಲಾಗಿದೆ. ಮುಂದುವರೆದು, 2010-11ನೇ ಸಾಲಿನಲ್ಲಿ ಟೆಂಡರು ಆಹ್ವಾನಿಸಿ ಅಂತಿಮೀಕರಿಸುವವರೆಗೆ 2009-10ನೇ ಸಾಲಿನಲ್ಲಿ ರೂ.1.00ಲಕ್ಷಕ್ಕೆ ಮೀರಿದ ಸಂದರ್ಭದಲ್ಲಿ ಟೆಂಡರ್ ಕರೆದು ಅಂಗೀಕರಿಸಲ್ಪಟ್ಟಿದ್ದ ಟೆಂಡರುದಾರರಿಂದ ಆಹಾರ ಸಾಮಗ್ರಿಗಳನ್ನು ಖರೀದಿಸಲು ಹಾಗು ದಿನಾಂಕ: 16-07-2008ರ ಸರ್ಕಾರದ ಸರಳೀಕರಣ ವ್ಯವಸ್ಥೆಯಂತೆ ಮುಂದುವರೆಸಿ, ಆಹಾರ ಸಾಮಗ್ರಿ ಮತ್ತು ಇತರೆ ಸಾಮಗ್ರಿಗಳನ್ನು ಖರೀದಿಸಿ ವಿದ್ಯಾರ್ಥಿ ನಿಲಯ/ ವಸತಿ/ ಆಶ್ರಮ / ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ/ ಆಶ್ರಮ ಶಾಲೆಗಳ ಸುಗಮ ನಿರ್ವಹಣೆಗಾಗಿ ಸಮಿತಿಯ ಅನುಮೋದನೆಗೆ ಟಿಪ್ಪಣಿ ಸಲ್ಲಿಸಿರುತ್ತಾರೆ. | ಅನುಮೋದನೆ ನೀಡಿತು. |
| 3 | ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ 2225-03-277-2-71 ಜಿಲ್ಲಾ ವಲಯ ಯೋಜನೇತರ 2225-03-277-2-53 ರಾಜ್ಯ ವಲಯ ಯೋಜನೆ 2225-03-277-3-03 ಜಿಲ್ಲಾ ವಲಯ ಯೋಜನೇತರ ಮತ್ತು 2225-03-277-2-70- ರಾಜ್ಯವಲಯ ಯೋಜನೆ ಶೀರ್ಷಿಕೆಗಳಲ್ಲಿ 2009-10ನೇ ಸಾಲಿನಲ್ಲಿ ಅನುದಾನದ ಕೊರತೆಯಿಂದ ಬಾಕಿ ಉಳಿದಿರುವ ಬಿಲ್ಲುಗಳನ್ನು 2010-11 ನೇ ಸಾಲಿನಲ್ಲಿ ಒದಗಿಸುವ ಅನುದಾನದಲ್ಲಿ ವೆಚ್ಚ ಭರಿಸುವ ಬಗ್ಗೆ. | ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಹಾಸನ ಇವರು ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಜಿಲ್ಲೆಯ ಎಂಟು ತಾಲ್ಲೂಕುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿನಿಲಯಗಳ ಹಾಗೂ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ನಿರ್ವಹಣಾ ವೆಚ್ಚದ ಬಿಲ್ಲುಗಳು ಅನುದಾನದ ಕೊರತೆಯಿಂದ ಬಾಕಿ ಉಳಿದಿರುತ್ತವೆ.<br>ಆದ್ದರಿಂದ, 2009-10ನೇ ಸಾಲಿನಲ್ಲಿ ಅನುದಾನದ ಕೊರತೆಯಿಂದ ಬಾಕಿ ಉಳಿದಿರುವ ನಿರ್ವಹಣಾ ವೆಚ್ಚದ ಬಿಲ್ಲುಗಳನ್ನು 2010-11 ನೇ ಸಾಲಿನ ಅನುದಾನದಲ್ಲಿ ವೆಚ್ಚ ಭರಿಸಿ ಸರಬರಾಜುದಾರರಿಗೆ ಪಾವತಿಸುವ ಕುರಿತು ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿಯ ಅನುಮೋದನೆಗೆ ಟಿಪ್ಪಣಿ ಸಲ್ಲಿಸಿರುತ್ತಾರೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಹಾಸನ ಇವರು ಕೋರಿರುವಂತೆ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ 2225-03-277-2-71 ಜಿಲ್ಲಾ ವಲಯ ಯೋಜನೇತರ 2225-03-277-2-53 ರಾಜ್ಯ ವಲಯ ಯೋಜನೆ 2225-03-277-3-03 ಜಿಲ್ಲಾ ವಲಯ ಯೋಜನೇತರ ಮತ್ತು 2225-03-277-2-70- ರಾಜ್ಯವಲಯ ಯೋಜನೆ ಶೀರ್ಷಿಕೆಗಳಲ್ಲಿ 2009-10ನೇ ಸಾಲಿನಲ್ಲಿ ಅನುದಾನದ ಕೊರತೆಯಿಂದ ಬಾಕಿ ಉಳಿದಿರುವ ಬಿಲ್ಲುಗಳನ್ನು 2010-11 ನೇ ಸಾಲಿನಲ್ಲಿ ಒದಗಿಸುವ ಅನುದಾನದಲ್ಲಿ ವೆಚ್ಚ ಭರಿಸಲು ಸಭೆಯು ಸರ್ವಾನುಮತದಿಂದ ಅನುಮೋದನೆ ನೀಡಿತು. |

| | | | |
|---|---|---|---|
| 4 | 2010-11ನೇ ಸಾಲಿಗೆ ಲಿಂಕ್ ಡಾಕ್ಯುಮೆಂಟಿನಲ್ಲಿ ಅನುದಾನವನ್ನು ನಿಗದಿಪಡಿಸಿರುವ ಬಗ್ಗೆ. | ಮುಖ್ಯ ಯೋಜನಾಧಿಕಾರಿಯವರು ಮಾತನಾಡುತ್ತಾ, 2010-11ನೇ ಸಾಲಿನ ಲಿಂಕ್ ಡಾಕ್ಯುಮೆಂಟರ್ ಬಂದಿರುತ್ತದೆ. ಲಿಂಕ್ ಡಾಕ್ಯುಮೆಂಟಿನಲ್ಲಿ ಇಲಾಖಾವಾರು ಯೋಜನೆಗಳಿಗೆ ನಿಗದಿಪಡಿಸಿರುವ ಅನುದಾನದ ವಿವರಗಳನ್ನು ಎಲ್ಲಾ ಇಲಾಖೆಗಳಿಗೆ ಕಳುಹಿಸಲಾಗುವುದು ಎಂದು ತಿಳಿಸಿದರು. ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗಳಿಗೆ ನಿಗದಿಪಡಿಸಿರುವ ಅನುದಾನದ ವಿವರಗಳನ್ನು ಸಭೆಯ ಗಮನಕ್ಕೆ ತಂದರು ಮತ್ತು 2010-11ನೇ ಸಾಲಿಗೆ ನಿಗದಿಪಡಿಸಿರುವ ಅನುದಾನಕ್ಕೆ ಸಂಬಂಧಿಸಿದಂತೆ, ಸಂಬಂಧಪಟ್ಟ ಇಲಾಖೆಯವರು ಮುಂದಿನ ಸ್ಥಾಯಿ ಸಮಿತಿ ಸಭೆಗೆ ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಿ ಅನುಮೋನೆಯನ್ನು ಪಡೆಯಲು ಅಗತ್ಯ ಕ್ರಮ ವಹಿಸಬೇಕೆಂದು ತಿಳಿಸಿದರು. ಮತ್ತು ವೇತನಕ್ಕಾಗಿ ನಿಗದಿಪಡಿಸಿರುವ ಅನುದಾನಕ್ಕೆ ಅನುಮೋನೆಯನ್ನು ನೀಡಬೇಕೆಂದು ಸಭೆಯನ್ನು ಕೋರಿದರು. | ಸಭೆಯು 2010-11ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗಳ ಯೋಜನೆಗಳಿಗೆ ನಿಗದಿಪಡಿಸಿರುವ ಅನುದಾನದ ವಿವರಗಳನ್ನು ಅವಗಾಹಿಸಿತು ಮತ್ತು ಸಿಬ್ಬಂದಿ ವೇತನಕ್ಕೆ ನಿಗದಿಪಡಿಸಿರುವ ಅನುದಾನಕ್ಕೆ ಸಭೆಯು ಅನುಮೋದನೆಯನ್ನು ನೀಡಿತು. |
| 5 | ಸಕಲೇಶಪುರ ತಾಲ್ಲೂಕು ಪಂಚಾಯಿತಿಗೆ ಸೇರಿದ ಕಟ್ಟಡದಲ್ಲಿ ನಡೆಯುತ್ತಿರುವ ವಿದ್ಯಾರ್ಥಿನಿಲಯಕ್ಕೆ ಬಾಡಿಗೆ ಪಾವತಿಸುವ ಬಗ್ಗೆ. | ಮಾನ್ಯ ಸಮಿತಿ ಅಧ್ಯಕ್ಷರು ಮಾತನಾಡುತ್ತಾ, ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಯನ್ನು ಅನುಷ್ಠಾನ ಮಾಡುವ ಇಲಾಖೆಗಳ ಅಧಿಕಾರಿಗಳು ಕಡ್ಡಾಯವಾಗಿ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಸಭೆಗೆ ಹಾಜರಾಗಬೇಕೆಂದು ತಿಳಿಸಿದರು. ಮತ್ತು ಸಭೆಗೆ ಗೈರು ಹಾಜರಾಗಿರುವ ಅಧಿಕಾರಿಗಳಿಂದ ವಿವರಣೆಯನ್ನು ಪಡೆಯುವಂತೆ ತಿಳಿಸಿದರು.<br>ಮಾನ್ಯ ಸದಸ್ಸರಯಾದ ಶ್ರೀ ಪರ್ವತಯ್ಯರವರು ಮಾತನಾಡುತ್ತಾ, ಸಕಲೇಶಪುರ ಟೌನ್‌ನಲ್ಲಿ ತಾಲ್ಲೂಕು ಪಂಚಾಯಿತಿಗೆ ಸೇರಿದ ಕಟ್ಟಡದಲ್ಲಿ ಸಮಾಜ ಕಲ್ಯಾಣ ಇಲಾಖೆಯ ವಿದ್ಯಾರ್ಥಿನಿಲಯವನ್ನು ನಡೆಸಲಾಗುತ್ತಿದೆ. ಆದರೆ, ತಾಲ್ಲೂಕು ಪಂಚಾಯಿತಿಯವರು ಸದರಿ ಕಟ್ಟಡಕ್ಕೆ ಬಾಡಿಗೆಯನ್ನು ನೀಡುವಂತೆ ಕೋರಿರುತ್ತಾರೆ. ಈ ಬಗ್ಗೆ ತಾಲ್ಲೂಕು ಪಂಚಾಯಿತಿಯಲ್ಲಿ ನಿರ್ಣಯವನ್ನು ಮಾಡಿರುತ್ತಾರೆ. ಅಲ್ಲದೆ, ಬಾಡಿಗೆಯನ್ನು ಪಾವತಿಸದಿದ್ದಲ್ಲಿ ಕಟ್ಟಡವನ್ನು ತೆರವುಗೊಳಿಸುವಂತೆ ತಿಳಿಸಿರುತ್ತಾರೆ. ಆದುದರಿಂದ, ಈ ಬಗ್ಗೆ ಪರಿಶೀಲಿಸಿ ಸೂಕ್ತ ನಿರ್ಣಯವನ್ನು ಮಾಡಬೇಕೆಂದು ಕೋರಿದರು.<br>ತಾಲ್ಲೂಕು ಪಂಚಾಯಿತಿಗೆ ಸೇರಿದ ಕಟ್ಟಡವು ಸರ್ಕಾರಿ ಕಟ್ಟಡವಾಗಿರುವುದರಿಂದ, ಜಿಲ್ಲಾ ಪಂಚಾಯಿತಿ ವತಿಯಿಂದ ಬಾಡಿಗೆಯನ್ನು ಪಾವತಿಸಲು ಅವಕಾಶವಿರುವುದಿಲ್ಲ. ಆದರೆ, ಕಟ್ಟಡದ ದುರಸ್ಥಿಗೆ ಅವಕಾಶವಿದ್ದು, ಸದರಿ ಕಟ್ಟಡಕ್ಕೆ ಅವಶ್ಯಕವಾಗಿ ಬೇಕಾಗಿರುವ ದುರಸ್ಥಿಯನ್ನು ಮಾಡಿಸಲು ಅನುದಾನವನ್ನು ನೀಡಬಹುದೆಂದು ಉಪ ಕಾರ್ಯದರ್ಶಿ (ಆಡಳಿತ)ರವರು ಅಭಿಪ್ರಾಯಪಟ್ಟರು. | ಸಭೆಯಲ್ಲಿ ವಿವರವಾಗಿ ವಿಷಯದ ಬಗ್ಗೆ ಚರ್ಚಿಸಲಾಯಿತು.<br>ಅದರಂತೆ, ಸಕಲೇಶಪುರ ಟೌನಿನಲ್ಲಿ ತಾಲ್ಲೂಕು ಪಂಚಾಯಿತಿಗೆ ಸೇರಿದ ಕಟ್ಟಡದಲ್ಲಿ ನಡೆಯುತ್ತಿರುವ ಸಮಾಜ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯವನ್ನು ನಡೆಸಲಾಗುತ್ತಿದ್ದು, ಸದರಿ ಕಟ್ಟಡವು ಸರ್ಕಾರಿ ಕಟ್ಟಡವಾಗಿರುವುದರಿಂದ, ಜಿಲ್ಲಾ ಪಂಚಾಯಿತಿಯಿಂದ ಬಾಡಿಗೆಯನ್ನು ನೀಡಲು ಅವಕಾಶವಿಲ್ಲದಿರುವ ಕಾರಣ, ಕಟ್ಟಡಕ್ಕೆ ಅವಶ್ಯ ದುರಸ್ಥಿಯನ್ನು ಸಮಾಜ ಕಲ್ಯಾಣ ಇಲಾಖೆಯ ಕಟ್ಟಡಗಳ ದುರಸ್ಥಿ ಯೋಜನೆಯಡಿಯಲ್ಲಿ ದುರಸ್ಥಿ ಪಡಿಸಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |

| | | | |
|---|---|---|---|
| | | ಮಾನ್ಯ ಸದಸ್ಯರಾದ ಶ್ರೀ ಪರ್ವತಯ್ಯರವರು ಮಾತನಾಡುತ್ತಾ, ಹಾನುಬಾಳು ಗ್ರಾಮದಲ್ಲಿ ನಡೆಯುತ್ತಿರುವ ವಿದ್ಯಾರ್ಥಿನಿಲಯದ ವಿದ್ಯಾರ್ಥಿಗಳಿಂದ ಅಲ್ಲಿಯ ಅಡುಗೆಯವರು ಇತರೆ ಕೆಲಸಗಳನ್ನು ಮಾಡಿಸಿಕೊಳ್ಳುತ್ತಿರುವುದು ಕಂಡುಬಂದಿರುತ್ತದೆ. ಆದ್ದರಿಂದ ಮಕ್ಕಳ ಪೋಷಕರೂ ಸಹ ಅಸಮಾಧಾನವನ್ನು ವ್ಯಕ್ತಪಡಿಸಿರುತ್ತಾರೆ. ಆದ್ದರಿಂದ, ವಿದ್ಯಾರ್ಥಿನಿಲಯದಲ್ಲಿ ಅಡುಗೆಯವರಾಗಿ ಕೆಲಸ ನಿರ್ವಹಿಸುತ್ತಿರುವ ಪುಟ್ಟಮ್ಮನವರನ್ನು ಬೇರೆ ಕಡೆಗೆ ನಿಯೋಜಿಸಲು ಕ್ರಮ ಕೈಗೊಳ್ಳಬೇಕೆಂದು ಕೋರಿದರು ಮತ್ತು ಸಕಲೇಶಪುರ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ನಿವೃತ್ತಿ ಹೊಂದಿದ ಶಿಕ್ಷಕರನ್ನು ನೇಮಕ ಮಾಡಲಾಗಿದೆ. ಇವರನ್ನೂ ಸಹ ಬದಲಾವಣೆ ಮಾಡಿ ಈಗಿನ ಯುವಜನತೆಯಲ್ಲಿ ಅರ್ಹ ಅಭ್ಯರ್ಥಿಯನ್ನು ನೇಮಕ ಮಾಡಲು ಕ್ರಮ ಕೈಗೊಳ್ಳಬೇಕೆಂದು ಕೋರಿದರು.<br>ಈ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿ ಮತ್ತು ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆ ಹಾಸನ ಇವರಿಗೆ ತಿಳಿಸಲಾಯಿತು. | |
| 6 | 2010-11ನೇ ಸಾಲಿನ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ ಮಾರಾಟ ಪಠ್ಯ ಪುಸ್ತಕಗಳನ್ನು ಒದಗಿಸುವ ಬಗ್ಗೆ. | ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಹಾಸನ ಇವರು 2010-11ನೇ ಸಾಲಿಗೆ ಜಿಲ್ಲೆಯಲ್ಲಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ ಓದುತ್ತಿರುವ ವಿದ್ಯಾರ್ಥಿಗಳಿಗೆ ಮಾರಾಟ ಪಠ್ಯಪುಸ್ತಕಗಳನ್ನು ಒದಗಿಸಲು ಅಗತ್ಯವಿರುವ ಮಾರಾಟ ಪಠ್ಯ ಪುಸ್ತಕಗಳ ಬೇಡಿಕೆಯನ್ನು ಆಯಾಯ ತಾಲ್ಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಡಿ.ಡಿ.ಗಳೊಂದಿಗೆ ಸಲ್ಲಿಸಲು ತಿಳಿಸಲಾಗಿದೆ. ಆದರೆ, ಈಗಾಗಲೆ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಪ್ರಾಂಶುಪಾಲರು ಆಯಾಯ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಬೇಡಿಕೆ ಪಟ್ಟಿಯನ್ನು ಈಗಾಗಲೇ ಸಲ್ಲಿಸಿರುತ್ತಾರೆ. ಇದಕ್ಕೆ ತಗಲುವ ಹಣವನ್ನು ಭರಿಸಲು 2009-10ರ ಆರ್ಥಿಕ ವರ್ಷ ಮುಕ್ತಾಯಗೊಂಡಿದ್ದು, ಅನುದಾನವಿಲ್ಲದೇ ಇರುವುದರಿಂದ, ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಠಿಯಿಂದ ಬೇಡಿಕೆಗನುಗುಣವಾಗಿ ಆಯಾ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ ಮಾರಾಟ ಪಠ್ಯ ಪುಸ್ತಕಗಳನ್ನು ಸರಬರಾಜು ಮಾಡಿ ಬಿಲ್ಲನ್ನು ಆಯಾ ಶಾಲೆಗಳ ಮುಖ್ಯಸ್ಥರಿಗೆ ನೀಡುವಂತೆ ಕ್ಷೇತ್ರ ಶಿಕ್ಷಣಾಧಿಕಾರಿಯವರಿಗೆ ತಿಳಿಸುವಂತೆ ಕೋರಿರುತ್ತಾರೆ ಮತ್ತು ಇದರ ವೆಚ್ಚವನ್ನು ಏಪ್ರಿಲ್/ಮೇ 2010ರ ಮಾಹೆಯಲ್ಲಿ ಬಿಡುಗಡೆಯಾಗುವ 2010-11ರ ಅನುದಾನದಲ್ಲಿ ಭರಿಸಿ ಡಿ.ಡಿ. ಮೂಲಕ ಸಲ್ಲಿಸಲಾಗುವುದೆಂದು ತಿಳಿಸಿರುತ್ತಾರೆ. | ವಿಷಯದ ಬಗ್ಗೆ ಸಭೆಯಲ್ಲಿ ಸಮಗ್ರವಾಗಿ ಚರ್ಚಿಸಲಾಯಿತು.<br>ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ನಡೆಯುತ್ತಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಂದ ಸಲ್ಲಿಸಿರುವ ಬೇಡಿಕೆಗನುಗುಣವಾಗಿ ಮಾರಾಟ ಪಠ್ಯ ಪುಸ್ತಕಗಳನ್ನು ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ ಸರಬರಾಜು ಮಾಡುವಂತೆ ಕ್ಷೇತ್ರ ಶಿಕ್ಷಣಾಧಿಕಾರಿಯವರಿಗೆ ತಿಳಿಸಲಾಯಿತು ಮತ್ತು ಈ ಸಂಬಂದ ತಗಲುವ ವೆಚ್ಚವನ್ನು |

| | | | |
|---|---|---|---|
| | | | ಏಪ್ರಿಲ್/ಮೇ 2010ರ ಮಾಹೆಯಲ್ಲಿ ಬಿಡುಗಡೆಯಾಗುವ 2010-11ರ ಅನುದಾನದಲ್ಲಿ ಭರಿಸಲು ಕ್ರಮ ಕೈಗೊಳ್ಳುವಂತೆ ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ/ ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಹಾಸನ ಇವರಿಗೆ ಸೂಚಿಸಲಾಯಿತು. |
| | | ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಹಾಸನ ಇವರು ಮಾತನಾಡುತ್ತಾ, 2009-10ನೇ ಸಾಲಿಗೆ ವಿಶೇಷ ಅಭಿವೃದ್ಧಿ ಯೋಜನೆಯಡಿ 26 ಅಂಗನವಾಡಿ ಕಟ್ಟಡಗಳು ಮಂಜೂರಾಗಿರುತ್ತವೆ. ಅನುದಾನವು ಮಾರ್ಚ್ 2009ರ ಅಂತ್ಯದಲ್ಲಿ ಬಿಡುಗಡೆಯಾಗಿದ್ದು, ಕರ್ನಾಟಕ ಭೂ ಸೇನಾ ನಿಗಮದವರಿಗೆ ಜಮಾ ಮಾಡಲಾಗಿದೆ ಎಂದು ಸಭೆಗೆ ವಿವರ ನೀಡಿದರು.<br>ಉಪ ಕಾರ್ಯದರ್ಶಿ(ಆಡಳಿ)ರವರು ಮಾತನಾಡುತ್ತಾ, ಅಂಗನವಾಡಿ ಕಟ್ಟಡ ನಿರ್ಮಿಸಲು ಸಮಸ್ಯೆಯಿರುವ ಗ್ರಾಮಗಳಲ್ಲಿ ನಿವೇಶನವನ್ನು ಇಲಾಖೆಯ ವಶಕ್ಕೆ ಪಡೆಯಲು ಅಗತ್ಯ ಕ್ರಮ ವಹಿಸಬೇಕೆಂದು ತಿಳಿಸಿದರು.<br>ಮುಂದುವರೆದು, ಅಂಗನವಾಡಿ ಕೇಂದ್ರಗಳ ಮಕ್ಕಳಿಗೆ ವಿತರಿಸುತ್ತಿರುವ ಆಹಾರವು ಉತ್ತಮವಾಗಿರುವುದಿಲ್ಲ. ಈ ಬಗ್ಗೆ ರಾಜ್ಯ ಮಟ್ಟದ ಸಭೆಯಲ್ಲಿ ಪ್ರಸ್ತಾಪಿಸಿ ಹಿರಿಯ ಅಧಿಕಾರಿಗಳ ಗಮನಕ್ಕೆ ತರಬೇಕೆಂದು ತಿಳಿಸಿದರು. | |
| | | ಕೃಷಿ ಇಲಾಖೆಯಲ್ಲಿ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಯಡಿಯಲ್ಲಿ ಜಿಲ್ಲೆಗೆ ಒಟ್ಟು ರೂ.3,73,400.00ನಿಗದಿಯಾಗಿದ್ದು, ಎಲ್ಲಾ ತಾಲ್ಲೂಕುಗಳಲ್ಲಿ ಕೃಷಿ ಪರಿಕರಗಳನ್ನು ಪರಿಶಿಷ್ಟ ಜಾತಿ/ ವರ್ಗಗಳ ಫಲಾನುಭವಿಗಳಿಗೆ ವಿತರಿಸಲಾಗಿದೆ ಎಂದು ಸಹಾಯಕ ಕೃಷಿ ನಿರ್ದೇಶಕರು ಸಭೆಗೆ ಮಾಹಿತಿ ನೀಡಿದರು.<br>ಉಪ ಕಾರ್ಯದರ್ಶಿ(ಆಡಳಿತ)ರವರು ಮಾತನಾಡುತ್ತಾ, ಮುಂದಿನ ಸಭೆಗೆ ಪರಿಶಿಷ್ಟ ಜಾತಿ/ ವರ್ಗಗಳ ಫಲಾನುಭವಿಗಳಿಗೆ ಒದಗಿಸಿರುವ ಸೌಲಭ್ಯಗಳ ಬಗ್ಗೆ ಫಲಾನುಭವಿವಾರು ಮಾಹಿತಿಯನ್ನು ಒದಗಿಸಬೇಕೆಂದು ತಿಳಿಸಿದರು. | |

| | | | |
|---|---|---|---|
| | | ಜಲಾನಯನ ಅಭಿವೃದ್ಧಿ ಇಲಾಖೆಯಡಿ ಕೃಷಿ ಹೊಂಡ ನಿರ್ಮಿಸಲು ರಾಜ್ಯ ವಲಯದಿಂದ ರೂ.59.64ಲಕ್ಷಗಳು ಬಿಡುಗಡೆಯಾಗಿದ್ದು, ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಕೃಷಿ ಹೊಂಡ ಮತ್ತು ಬದು ನಿರ್ಮಾಣವನ್ನು ಮಾಡಲಾಗಿದೆ ಎಂದು ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳು ವಿವರ ನೀಡಿದರು.<br>ಉಪ ಕಾರ್ಯದರ್ಶಿ(ಆಡಳಿತ)ರವರು ಮಾತನಾಡುತ್ತಾ, ಏಪ್ರಿಲ್ 2010ರ ಅಂತ್ಯದವರೆಗೆ ವಿನಿಯೋಗಿಸಿರುವ ಅನುದಾನದ ವಿವರಗಳನ್ನು ಮುಂದಿನ ಸಭೆಗೆ ಒದಗಿಸಬೇಕೆಂದು ತಿಳಿಸಿದರು.<br>ಡಾ: ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಲ್ಲಿ 2009-10ನೇ ಸಾಲಿಗೆ ನಿಗದಿಪಡಿಸಿರುವ ಕೊಳವೆ ಬಾವಿಗಳು ಮತ್ತು ಹಿಂದಿನ 4-5 ವರ್ಷಗಳಿಂದ ಬಾಕಿ ಉಳಿದಿರುವ ಕೊಳವೆ ಬಾವಿಗಳನ್ನು ಪೂರ್ಣಗೊಳಿಸಿ ರೈತರಿಗೆ ಉಪಯೋಗಕ್ಕೆ ನೀಡುವ ಬಗ್ಗೆ ಅಗತ್ಯ ಕ್ರಮ ವಹಿಸಬೇಕೆಂದು ಜಿಲ್ಲಾ ವ್ಯವಸ್ಥಾಪಕರು, ಡಾ: ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ, ಹಾಸನ ಇವರಿಗೆ ತಿಳಿಸಲಾಯಿತು. | |
| | | ವಂದನಾರ್ಪಣೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು. | |

(ಹೆಚ್.ವೈ ಚಂದ್ರಶೇಖರ್)
ಅಧ್ಯಕ್ಷರು
ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ